All India Radio: Bangalore
Regional Bulletin In Kannada
20.09.2026 / 2.30 p.m.
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ಜನರ ಸೇವೆಯೇ ಸರ್ಕಾರದ ಮೊದಲ ಆದ್ಯತೆ ; ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್
- ರಾಜ್ಯದಲ್ಲಿನ ೨೦೦ಕ್ಕೂ ಹೆಚ್ಚು ತಾಲೂಕುಗಳು ಬರಪೀಡಿತ ಘೋಷಣೆ ಸಾಧ್ಯತೆ : ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್
- ಜಾಗತಿಕ ಕ್ವಾಂಟಂ ವೇದಿಕೆಯಾಗಿ ೨೦೨೭ರ ಬೆಂಗಳೂರು ಕ್ವಾಂಟಂ ಶೃಂಗಸಭೆ ವಿಸ್ತರಿಸಲು ರಾಜ್ಯ ಸಜ್ಜು - ಡಾ.ಅಜಯ್ ಧರ್ಮಸಿಂಗ್
- ಬರಪೀಡಿತ ಪ್ರದೇಶದ ರೈತರಿಗೆ ಬೆಳೆ ನಷ್ಟ ಪರಿಹಾರಕ್ಕೆ ರಾಜ್ಯ ರೈತ ಸಂಘಟನೆಗಳ ಒಕ್ಕೂಟ ಆಗ್ರಹ

<><><><>

ಜನರ ಸೇವೆಯೇ ಕಾಂಗ್ರೆಸ್ ಸರ್ಕಾರದ ಮೊದಲ ಆದ್ಯತೆಯಾಗಿದೆ ಎಂದು ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಹೇಳಿದ್ದಾರೆ. ಹೆಬ್ಬಾಳದ ಭೂಪಸಂದ್ರದಲ್ಲಿ ಅತ್ಯಾಧುನಿಕ ಸುಸಜ್ಜಿತ ಮಲ್ಟಿಸ್ಪೆಷಾಲಿಟಿ ಆಸ್ಪತ್ರೆ ನಿರ್ಮಾಣಕ್ಕೆ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದ ಮುಖ್ಯಮಂತ್ರಿ, ರಾಜ್ಯ ಸರ್ಕಾರ ಜನರ ಆರೋಗ್ಯಕ್ಕೆ ಹೆಚ್ಚಿನ ಒತ್ತು ನೀಡಿದೆ. ಕನಕಪುರದಲ್ಲಿ  ತಾಯಿ-ಮಗು ಆಸ್ಪತ್ರೆ ಮಾಡಿಸಲಾಗಿದೆ, ಇಡೀ ದೇಶದಲ್ಲಿ ಎಲ್ಲಿಯೂ ನಮ್ಮ ರೀತಿಯ ಆರೋಗ್ಯ ವ್ಯವಸ್ಥೆ ಇಲ್ಲ. ದೇಶ-ವಿದೇಶಗಳಿಂದ ಜನರು ನಮ್ಮ ರಾಜ್ಯಕ್ಕೆ ಬರುತ್ತಿದ್ದಾರೆ ಎಂದರು. ಬೇರೆ ರಾಜ್ಯದ ೪೯ ಲಕ್ಷ ಜನರು ಇಲ್ಲಿಗೆ ಬಂದು ಕೆಲಸ ಮಾಡುತ್ತಿದ್ದು, ಬೆಂಗಳೂರು ಒಂದರಲ್ಲೇ ೫೨ ಸಾವಿರ ವೈದ್ಯರು  ಕೆಲಸ ಮಾಡುತ್ತಿದ್ದಾರೆ. ಬೆಂಗಳೂರು ಅಭಿವೃದ್ಧಿಗೆ ಹಲವು ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ತಿಳಿಸಿದರು. ಸಚಿವ ಬೈರತಿ ಸುರೇಶ ಮಾತನಾಡಿ, ಸುಮಾರು ೧೫೦ ಕೋಟಿ ರೂಪಾಯಿ ವೆಚ್ಚದಲ್ಲಿ ಈ ಆಸ್ಪತ್ರೆ ನಿರ್ಮಾಣ ಮಾಡಲಾಗುತ್ತಿದೆ ಎಂದು ಹೇಳಿದರು.

<><><><>

ಕೇಂದ್ರ ಸರ್ಕಾರದ ಮಾನದಂಡಗಳಿಗೆ ಒಳಪಡುವ ತಾಲೂಕುಗಳನ್ನು ಗುರುತಿಸಿ ಬರಪೀಡಿತ ಪ್ರದೇಶ ಎಂದು ಘೋಷಣೆ ಮಾಡಲಾಗುತ್ತದೆ ಎಂದು ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಹೇಳಿದ್ದಾರೆ. ದಾವಣಗೆರೆಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬರಪೀಡಿತ ಪ್ರದೇಶ ಘೋಷಣೆಗೆ ಕೇಂದ್ರ ಸರ್ಕಾರ ನಿಗದಿಪಡಿಸಿರುವ ೧೦ ಪ್ರಮುಖ ಮಾನದಂಡಗಳನ್ನು ಪರಿಗಣಿಸಲಾಗುತ್ತದೆ. ಉಪಗ್ರಹ ಆಧರಿತ ಚಿತ್ರಗಳು ಮತ್ತು ಅದರಿಂದ ಸಂಗ್ರಹಿಸಿದ ದತ್ತಾಂಶಗಳನ್ನು ಆಧರಿಸಿ ಬರಪೀಡಿತ ತಾಲೂಕು ಎಂದು ಘೋಷಣೆ ಮಾಡಲಾಗುತ್ತದೆ ಎಂದು ತಿಳಿಸಿದರು. ರಾಜ್ಯದಲ್ಲಿ ಮೊದಲ ಹಂತದಲ್ಲಿ ೧೦೧ ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸಲಾಗಿತ್ತು. ತದನಂತರ ೨೪ ತಾಲೂಕುಗಳನ್ನು ಸೇರಿಸಲಾಗಿದೆ. ಮುಂಬರುವ ದಿನಗಳಲ್ಲಿ ಇನ್ನು ೫೨ ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸುವ ಸಾಧ್ಯತೆಯಿದೆ ಎಂದರು. ಲಭ್ಯವಿರುವ ಮಾಹಿತಿ ಪ್ರಕಾರ ರಾಜ್ಯದ ೨೦೦ಕ್ಕೂ ಹೆಚ್ಚು ತಾಲೂಕುಗಳು ಅಂತಿಮವಾಗಿ ಬರಪೀಡಿತ ಎಂದು ಘೋಷಣೆಯಾಗುವ ನಿರೀಕ್ಷೆಯಿದೆ ಎಂದು ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಮಾಹಿತಿ ನೀಡಿದರು. ರಾಜ್ಯದ ೧೦೧ ತಾಲೂಕುಗಳಲ್ಲಿ ಬರದಿಂದಾಗಿ ಸುಮಾರು ೧೮ ಸಾವಿರ ಕೋಟಿ ರೂಪಾಯಿ ನಷ್ಟ ಸಂಭವಿಸಿದ್ದು, ಮೊದಲ ಹಂತದಲ್ಲಿ ೩ ಸಾವಿರದ ೫೦೦ ಕೋಟಿ ರೂಪಾಯಿ ಪರಿಹಾರ ಬಿಡುಗಡೆ ಮಾಡುವಂತೆ ಕೇಂದ್ರ ಸರ್ಕಾರವನ್ನು ಕೋರಲಾಗಿದೆ ಎಂದು ಅವರು ತಿಳಿಸಿದರು.

ಧ್ವನಿ: ಡಾ.ಜಿ.ಪರಮೇಶ್ವರ್ ( ೨೯ ಸೆಕೆಂಡ್‌ಗಳು)

<><><><>

೨೦೨೭ರಲ್ಲಿ ನಡೆಯಲಿರುವ ೨ನೇ ಕ್ವಾಂಟಂ ಇಂಡಿಯಾ ಬೆಂಗಳೂರು ಶೃಂಗಸಭೆಯನ್ನು ಜಾಗತಿಕ ಮಟ್ಟದ ಪ್ರಮುಖ ಕ್ವಾಂಟಂ ವೇದಿಕೆಯಾಗಿಸಲು ರಾಜ್ಯ ಸರ್ಕಾರ ಉದ್ದೇಶಿಸಿದೆ ಎಂದು ಸಣ್ಣ ನೀರಾವರಿ ಮತ್ತು ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಡಾ.ಅಜಯ್ ಧರ್ಮಸಿಂಗ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ನಡೆದ ಕ್ಯೂಎನ್‌ಯು ಲ್ಯಾಬ್ಸ್‌ನ ೧೦ನೇ ವಾರ್ಷಿಕೋತ್ಸವ ಹಾಗೂ ಕ್ಯೂಶೀಲ್ಡ್ ೨.೦ ಬಿಡುಗಡೆ ಕಾರ್ಯಕ್ರಮದಲ್ಲಿ ಮಾತನಾಡಿದ ಸಚಿವರು, ಮುಂದಿನ ಸಮಾವೇಶದಲ್ಲಿ ಜಾಗತಿಕ ಸಂಶೋಧಕರು, ತಂತ್ರಜ್ಞನ ಕಂಪನಿಗಳು, ನವೋದ್ಯಮಗಳು, ಹೂಡಿಕೆದಾರರು ಮತ್ತು ನೀತಿ ನಿರ್ಧಾರಕರ ಹೆಚ್ಚಿನ ಪಾಲ್ಗೊಳ್ಳುವಿಕೆಗೆ ಒತ್ತು ನೀಡಲಾಗುವುದು

ಎಂದರು. ೨೦೨೭ರ ಶೃಂಗಸಭೆ ಕೇವಲ ಸಮ್ಮೇಳನವಾಗಿರಬಾರದು, ಸಂಶೋಧನೆ, ಉದ್ಯಮ, ನವೋದ್ಯಮ, ಹೂಡಿಕೆ ಮತ್ತು ಅಂತಾರಾಷ್ಟ್ರೀಯ ಸಹಭಾಗಿತ್ವಗಳನ್ನು ಒಂದೇ ವೇದಿಕೆಗೆ ಸಂಪರ್ಕಿಸುವ ಜಾಗತಿಕ ಕ್ವಾಂಟಂ ವೇದಿಕೆಯಾಗಬೇಕು ಎಂದು ಅವರು ಹೇಳಿದರು. ಕ್ವಾಂಟಂ ಸಂಶೋಧನೆ, ಹಾರ್ಡ್‌ವೇರ್, ನವೋದ್ಯಮಗಳು, ಪ್ರತಿಭೆ, ಉದ್ಯಮ ಮತ್ತು ವಾಣಿಜ್ಯೀಕರಣವನ್ನು ಒಂದೇ ವ್ಯವಸ್ಥೆಯಲ್ಲಿ ಒಗ್ಗೂಡಿಸುವುದು ಕ್ವಾಂಟಂ ಸಿಟಿಯ ಉದ್ದೇಶವಾಗಿದೆ. ೨೦೩೫ರ ವೇಳೆಗೆ ೨೦ ಬಿಲಿಯನ್ ಡಾಲರ್ ಕ್ವಾಂಟಂ ಆರ್ಥಿಕತೆಯನ್ನು ನಿರ್ಮಿಸುವ ಗುರಿ ಹೊಂದಲಾಗಿದೆ ಎಂದು ಅವರು ತಿಳಿಸಿದರು. ಭಾರತೀಯ ತಂತ್ರಜ್ಞಾನಗಳನ್ನು ಜಾಗತಿಕ ಮಾರುಕಟ್ಟೆಗೆ ಕೊಂಡೊಯ್ಯುವ ಸಾಮರ್ಥ್ಯ ಹೊಂದಿರುವ ಸ್ವದೇಶಿ ಡೀಪ್‌ಟೆಕ್ ಕಂಪನಿಗಳಿಗೆ ರಾಜ್ಯ ಸರ್ಕಾರ ನಿರಂತರ ಪ್ರೋತ್ಸಾಹ ನೀಡಲಿದೆ ಎಂದರು.

<><><><>

ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ, ಕರಡು ಮತದಾರರ ಪಟ್ಟಿಯಲ್ಲಿ ಬಿಟ್ಟುಹೋಗಿರುವ ಅರ್ಹ ಮತದಾರರ ಮರು ಸೇರ್ಪಡೆ ಹಾಗೂ ಹೊಸ ಮತದಾರರ ನೋಂದಣಿ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ ಕೋಲಾರದಲ್ಲಿಂದು ಆಯೋಜಿಸಿದ್ದ 'ಜಾಗೃತಿ ಜಾಥಾ' ಕಾರ್ಯಕ್ರಮಕ್ಕೆ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಪ್ರವೀಣ್ ಪಿ. ಬಾಗೇವಾಡಿ ಚಾಲನೆ ನೀಡಿದರು. ಬಳಿಕ ಮಾತನಾಡಿದ ಅವರು, ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆಗೆ ಸಂಬಂಧಿಸಿದಂತೆ ಕರಡು ಮತದಾರರ ಪಟ್ಟಿ ಪ್ರಕಟವಾಗಿದ್ದು, ಸಾರ್ವಜನಿಕರು ಪಟ್ಟಿಯಲ್ಲಿ ತಮ್ಮ ಹೆಸರು ಹಾಗೂ ಇತರೆ ವಿವರಗಳು ಸರಿಯಾಗಿವೆಯೇ ಎಂಬುದನ್ನು ಪರಿಶೀಲಿಸಿಕೊಳ್ಳಬೇಕು. ಒಂದು ವೇಳೆ ಹೆಸರು ಬಿಟ್ಟುಹೋಗಿದ್ದರೆ, ಕೂಡಲೇ ನಿಮ್ಮ ವ್ಯಾಪ್ತಿಯ ಬೂತ್ ಮಟ್ಟದ ಅಧಿಕಾರಿಗಳನ್ನು ಸಂಪರ್ಕಿಸಿ ನಿಗದಿತ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸುವ ಮೂಲಕ ಮರು ಸೇರ್ಪಡೆ ಮಾಡಿಕೊಳ್ಳಬಹುದು ಎಂದು ತಿಳಿಸಿದರು. ಕರಡು ಪಟ್ಟಿಯಲ್ಲಿ ಅರ್ಹ ಮತದಾರರ ಹೆಸರು ಬಿಟ್ಟುಹೋಗಿದ್ದಲ್ಲಿ, ನಿಗದಿತ ಪ್ರಕ್ರಿಯೆಯಂತೆ ಮರು ಸೇರ್ಪಡೆಗಾಗಿ ಅರ್ಜಿ ಸಲ್ಲಿಸಲು ಅವಕಾಶವಿದೆ. ಇದೇ ವೇಳೆ, ೧೮ ವರ್ಷ ಪೂರ್ಣಗೊಂಡಿರುವ ಯುವಜನರು ಹೊಸ ಮತದಾರರಾಗಿ ನೋಂದಾಯಿಸಿಕೊಳ್ಳುವಂತೆಯೂ ಸಾರ್ವಜನಿಕರಲ್ಲಿ ಮನವಿ ಮಾಡಿದರು. ಮತದಾರರ ಪಟ್ಟಿಗೆ ಹೆಸರು ಸೇರ್ಪಡೆ, ವಿವರಗಳ

ತಿದ್ದುಪಡಿ ಸೇರಿದಂತೆ ಮತದಾರರಿಗೆ ಸಂಬಂಧಿಸಿದ ವಿವಿಧ ಸೇವೆಗಳನ್ನು ಚುನಾವಣಾ ಆಯೋಗದ ಆನ್‌ಲೈನ್ ವ್ಯವಸ್ಥೆಗಳ ವೋಟರ್ ಹೆಲ್ಪ್‌ಲೈನ್ ಮೂಲಕವೂ ಪಡೆಯಬಹುದಾಗಿದೆ. ಆದ್ದರಿಂದ ಪ್ರತಿಯೊಬ್ಬ ಅರ್ಹ ನಾಗರಿಕರು ತಮ್ಮ ಮತದಾನದ ಹಕ್ಕನ್ನು ಚಲಾಯಿಸಲು ಅನುಕೂಲವಾಗುವಂತೆ ನೋಂದಣಿ ಹಾಗೂ ಪಟ್ಟಿಯಲ್ಲಿನ ವಿವರಗಳನ್ನು ಖಚಿತಪಡಿಸಿಕೊಳ್ಳಬೇಕು ಎಂದು ಹೇಳಿದರು.

<><><><>

ರಾಜ್ಯದಲ್ಲಿನ ಬರ ಪೀಡಿತ ಪ್ರದೇಶದ ರೈತರಿಗೆ ಬೆಳೆನಷ್ಟ ಪರಿಹಾರವಾಗಿ ಎಕರೆಗೆ ೨೫ ಸಾವಿರ ರೂಪಾಯಿ ಹಣವನ್ನು ಕೂಡಲೇ ಬಿಡುಗಡೆ ಮಾಡಬೇಕು ಎಂದು ರಾಜ್ಯ ರೈತರ ಸಂಘಟನೆಗಳ ಒಕ್ಕೂಟದ ರಾಜ್ಯಾಧ್ಯಕ್ಷ ಕುರುಬೂರು ಶಾಂತಕುಮಾರ್ ರಾಜ್ಯ ಸರ್ಕಾರವನ್ನು ಒತ್ತಾಯಿಸಿದ್ದಾರೆ. ಜಾನುವಾರುಗಳ ಮೇವಿಗಾಗಿ ಮೇವು ಬ್ಯಾಂಕ್ ತೆರೆಯಬೇಕು. ರೈತರು ವಲಸೆ ಹೋಗುವುದನ್ನು ತಪ್ಪಿಸಲು ಕೂಡಲೇ ವಿಕಸಿತ ಭಾರತ ಜಿ ರಾಮ್ ಜಿ ಯೋಜನೆ ಕಾಮಗಾರಿ ಕೈಗೆತ್ತಿಕೊಂಡು ರೈತರಿಗೆ ಧನ ಸಹಾಯ ಮಾಡಬೇಕು ಎಂದು ಒತ್ತಾಯಿಸಿದ್ದಾರೆ. ಒಣಗುತ್ತಿರುವ ಬೆಳೆಗಳನ್ನು ರಕ್ಷಿಸಲು ಕೃಷಿ ಪಂಪ್ ಸೆಟ್‌ಗಳಿಗೆ ಸಮರ್ಪಕ ವಿದ್ಯುತ್ ಪೂರೈಕೆ ಮಾಡಬೇಕು ಎಂದು ಅವರು ರಾಜ್ಯ ಸರ್ಕಾರವನ್ನು ಆಗ್ರಹಿಸಿದ್ದಾರೆ.

<><><><>

ಕೋಲಾರ ಜಿಲ್ಲೆಯಲ್ಲಿ ನಿನ್ನೆ ಆಯೋಜಿಸಿದ್ದ 'ರಾಷ್ಟ್ರೀಯ ಲೋಕ್ ಅದಾಲತ್' ಕಾರ್ಯಕ್ರಮದಲ್ಲಿ ಒಟ್ಟು ೩೪ ಸಾವಿರದ ೫೪೨ ಪ್ರಕರಣಗಳನ್ನು ರಾಜಿ-ಸಂಧಾನದ ಮೂಲಕ ಇತ್ಯರ್ಥಪಡಿಸಲಾಗಿದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಪ್ರಭು ಎನ್. ಬಡಿಗೇರ್ ತಿಳಿಸಿದ್ದಾರೆ. ಜಿಲ್ಲೆಯ ವಿವಿಧ ನ್ಯಾಯಾಲಯಗಳಲ್ಲಿ ವರ್ಷಾನುಗಟ್ಟಲೆ ಬಾಕಿ ಉಳಿದಿದ್ದ ೩ ಸಾವಿರದ ೨೯೪ ಸಿವಿಲ್, ಕ್ರಿಮಿನಲ್ ಹಾಗೂ ವಿಮಾ ಪರಿಹಾರ ಪ್ರಕರಣಗಳನ್ನು ಪರಸ್ಪರ ಮಾತುಕತೆಯ ಮೂಲಕ ಇತ್ಯರ್ಥಪಡಿಸಲಾಗಿದೆ. ನ್ಯಾಯಾಲಯದ ಬಾಕಿ ಪ್ರಕರಣಗಳಲ್ಲಿ ೨೨೩ ಚೆಕ್ ಬೌನ್ಸ್, ೧೧ ಕೌಟುಂಬಿಕ ವ್ಯಾಜ್ಯಗಳು, ೫೬ ಆಸ್ತಿ ವಿಭಾಗದ ದಾವೆಗಳು, ೧೮ ಮೋಟಾರು ವಾಹನ ಅಪಘಾತ ಪರಿಹಾರ ಪ್ರಕರಣಗಳು, ೧೨ ಕ್ರಿಮಿನಲ್ ಕಾಂಪೌಂಡೇಬಲ್, ೨೬೦ ಇತರೆ ಸಿವಿಲ್ ಹಾಗೂ ೨,೬೦೪ ಇತರೆ ಕ್ರಿಮಿನಲ್ ಪ್ರಕರಣಗಳು ಒಳಗೊಂಡಿವೆ ಎಂದು ಅವರು ಹೇಳಿಕೆಯಲ್ಲಿ ತಿಳಿಸಿದ್ದಾರೆ. ಈ ಅದಾಲತ್‌ನಲ್ಲಿ ಭಿನ್ನಾಭಿಪ್ರಾಯಗಳಿಂದ ದೂರಾಗಿದ್ದ ಮೂವರು

ದಂಪತಿಗಳು ಮತ್ತೆ ಒಂದಾಗಿದ್ದಾರೆ. ಜೊತೆಗೆ ಪೋಷಕರನ್ನು ಕಡೆಗಣಿಸುವ ಪ್ರವೃತ್ತಿಗೆ ಕಡಿವಾಣ ಹಾಕುವ ನಿಟ್ಟಿನಲ್ಲಿ ಅಜ್ಜ, ಮಗ ಮತ್ತು ಮೊಮ್ಮಗ ಹೀಗೆ ಮೂರು ತಲೆಮಾರುಗಳನ್ನು ಒಂದೇ ವೇದಿಕೆಗೆ ಕರೆತಂದು, ಸೂಕ್ತ ತಿಳುವಳಿಕೆ ನೀಡಿ ರಾಜಿಸಂಧಾನ ಮಾಡಿಸುವ ಮೂಲಕ ಆದರ್ಶ ಕೌಟುಂಬಿಕ ಬಾಂಧವ್ಯವನ್ನು ಮರುಸ್ಥಾಪಿಸಲಾಯಿತು ಎಂದು ಅವರು ಮಾಹಿತಿ ಹಂಚಿಕೊಂಡಿದ್ದಾರೆ.

<><><><>

ಹಾವೇರಿ ಜಿಲ್ಲೆಯಾದ್ಯಂತ ಸಂಚಾರ ನಿಯಮಗಳನ್ನು ಕಟ್ಟುನಿಟ್ಟಾಗಿ ಜಾರಿಗೆ ತರಲು ಹಲವು ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಯಶೋಧಾ ವಂಟಗೋಡಿ ಮಾಹಿತಿ ನೀಡಿದ್ದಾರೆ. ನಗರದಲ್ಲಿ ಎರಡು ಹಂತದಲ್ಲಿ  ಸಂಚಾರ ನಿರ್ವಹಣಾ ವ್ಯವಸ್ಥೆ ರೂಪಿಸಲಾಗಿದೆ, ಈ ಹೊಸ ವ್ಯವಸ್ಥೆಗೆ 'ಹದ್ದಿನಕಣ್ಣು' ಎಂಬುದಾಗಿ ಹೆಸರಿಡಲಾಗಿದೆ. ಈವರೆಗೆ ೫ ಸಾವಿರ ೫೭೪ ವಾಹನ ಸವಾರರಿಗೆ ದಂಡ ವಿಧಿಸಲಾಗಿದೆ ಎಂದು ಅವರು ಹೇಳಿದ್ದಾರೆ. ಸದ್ಯ ಹಾವೇರಿಯ ನಾಲ್ಕು ವೃತ್ತಗಳಲ್ಲಿ ಐಟಿಎಂಎಸ್ ವ್ಯವಸ್ಥೆಯಿದೆ. ಈ ಕ್ಯಾಮೆರಾಗಳಲ್ಲಿ ಸೆರೆಯಾಗುವ ಚಿತ್ರಗಳನ್ನು ವೀಕ್ಷಿಸಲು ಹಾಗೂ ಇ-ಚಲನ್ ಸೃಷ್ಟಿಸಲು ಜಿಲ್ಲಾ ಪೊಲೀಸ್ ಕಚೇರಿಯಲ್ಲಿ ಕಮಾಂಡ್ ಕೇಂದ್ರ ತೆರೆಯಲಾಗಿದೆ. ಈ ಕೇಂದ್ರದ ಮೂಲಕ ಕ್ಯಾಮೆರಾ ಕಾರ್ಯಾಚರಣೆಯನ್ನು ನಿಖರವಾಗಿ ವೀಕ್ಷಿಸಬಹುದಾಗಿದೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>